RNU AIR DHARWAD

**DECEMBER 14,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ಶಿವಮೊಗ್ಗದ ಕುವೆಂಪು ಪ್ರತಿಷ್ಠಾನಕ್ಕೆ ಡಾಕ್ಟರ್ ಬಿ.ಎಲ್. ಶಂಕರ, ಉಡುಪಿಯ ಶಿವರಾಮ ಕಾರಂತ ಟ್ರಸ್ಟ್ ಗೆ, ಉಡುಪಿಯ ಗಣನಾಥ ಎಕ್ಕಾರು ಸೇರಿದಂತೆ, 9 ಪ್ರತಿಷ್ಠಾನ ಹಾಗೂ ಟ್ರಸ್ಟ್‌ಗಳಿಗೆ, ರಾಜ್ಯ ಸರ್ಕಾರ, ಅಧ್ಯಕ್ಷರು ಹಾಗೂ ಸದಸ್ಯರನ್ನು ನೂತನವಾಗಿ ನೇಮಕ ಮಾಡಿದೆ. ಸೂಳೆಬಾವಿಯ ಪಿ.ಬಿ ಧುತ್ತರಗಿ ಟ್ರಸ್ಟ್‌ಗೆ ಸಂಗಪ್ಪ ಕಲ್ಲಪ್ಪ ಕೊನೆಸಾಗರ, ಮಂಡ್ಯದ ಕೆ.ಎಸ್.ನರಸಿಂಹಸ್ವಾಮಿ ಟ್ರಸ್ಟ್‌ಗೆ, ಕಿಕ್ಕೇರಿ ಕೃಷ್ಣಮೂರ್ತಿ, ಪು.ತಿ.ನ ಟ್ರಸ್ಟ್ ಗೆ ಮೈಸೂರಿನ ಪ್ರೊಫೆಸರ್ ಎಂ. ಕೃಷ್ಣೇಗೌಡ, ಬೆಳಗಾವಿಯ ಬಸವರಾಜ ಕಟ್ಟೀಮನಿ ಪ್ರತಿಷ್ಠಾನಕ್ಕೆ ರಾಯಭಾಗದ ಯಲ್ಲಪ್ಪ ಹಿಮ್ಮಡಿ, ಬೆಳಗಾವಿಯ ಬೆಟಗೇರಿ ಕೃಷ್ಣಶರ್ಮ ಟ್ರಸ್ಟ್ ಗೆ, ಧಾರವಾಡದ ವಿನಯ ನಾಯಕ ಅವರನ್ನು, ಅಧ್ಯಕ್ಷರಾಗಿ ಸರ್ಕಾರ ನೇಮಕ ಮಾಡಿದೆ.

<><><>

ಚಿಕ್ಕಮಗಳೂರಿನ ಶ್ರೀ ದತ್ತ ಪೀಠದಲ್ಲಿ, ಇಂದು 25 ನೇ ವರ್ಷದ ದತ್ತ ಜಯಂತಿ ಕಾರ್ಯಕ್ರಮ ನಡೆಯುತ್ತಿದ್ದು, ರಾಜ್ಯದ ವಿವಿಧೆಡೆಗಳಿಂದ ಆಗಮಿಸಿರುವ, 30 ಸಾವಿರ ದತ್ತ ಮಾಲಾ ಧಾರಿಗಳು ದತ್ತ ಮಹಾರಾಜರ ಪಾದುಕೆ ದರ್ಶನ ಪಡೆಯುತ್ತಿದ್ದಾರೆ. ಜಿಲ್ಲಾಡಳಿತದ ವತಿಯಿಂದ ಕುಡಿಯುವ ನೀರು ಹಾಗೂ ಅಗತ್ಯ ಮೂಲ ಸೌಕರ್ಯ ಕಲ್ಪಿಸಲಾಗಿದೆ. ಜಿಲ್ಲೆಯಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ. ಅಲ್ಲಂಪುರ ಹಾಗು ಕೈಮರ ಚೆಕ್ ಪೋಸ್ಟ್ ಬಳಿ ಪೊಲೀಸರು ವಾಹನಗಳ ತಪಾಸಣೆ ನಡೆಸುತ್ತಿದ್ದು, ಮಧ್ಯಾಹ್ನ 2 ಗಂಟೆ ವರೆಗೆ ದತ್ತಪೀಠಕ್ಕೆ ತೆರಳುವ ಅವಕಾಶ ನೀಡಲಾಗಿದೆ.

<><><>

ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ಕೋರಿ, 50ಕ್ಕೂ ಹೆಚ್ಚು ಪ್ರಸ್ತಾವಗಳು ಸಲ್ಲಿಕೆಯಾಗಿವೆ; ಮುಖ್ಯಮಂತ್ರಿಯವರು ಹಣಕಾಸು ಇಲಾಖೆಯೊಂದಿಗೆ ಚರ್ಚಿಸಿ, ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ ಎಂದು, ನಗರಾಭಿವೃದ್ಧಿ ಮತ್ತು ನಗರ ಯೋಜನಾ ಖಾತೆ ಸಚಿವ ಬಿ.ಎಸ್.ಸುರೇಶ್ ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆ, ಕುಮಟಾ ಕ್ಷೇತ್ರದ ಶಾಸಕ ದಿನಕರ್ ಕೇಶವ್ ಶೆಟ್ಟಿಯವರು, ಗೋಕರ್ಣ ಗ್ರಾಮ ಪಂಚಾಯಿತಿಯನ್ನು, ಪಟ್ಟಣ ಪಂಚಾಯಿತಿ ಅಥವಾ ಪುರಸಭೆಯಾಗಿ ಮೇಲ್ದರ್ಜೆಗೇರಿಸಲು, ಪ್ರಸ್ತಾವ ಸಲ್ಲಿಸಿದ್ದಾರೆ. ಔರಾದ್ ಪಟ್ಟಣ ಪಂಚಾಯಿತಿಯನ್ನು ಪುರಸಭೆಯಾಗಿ ಹಾಗೂ ಕಮಲ್‌ನಗರವನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸುವಂತೆ, ಶಾಸಕ ಪ್ರಭು ಚವ್ಹಾಣ್, ಸಚಿವ ರಹೀಂ ಖಾನ್ ಅವರಲ್ಲಿ ಮನವಿ ಮಾಡಿದ್ದಾರೆ.

<><><>

ರಾಜ್ಯದಲ್ಲಿ ಹೊಸದಾಗಿ, 3 ಸಾವಿರದ 9 ನೂರಾ 88, ಅಂಗನವಾಡಿ ಕೇಂದ್ರಗಳನ್ನು ತೆರೆಯಲು, ಕೇಂದ್ರ ಸರ್ಕಾರದ ಅನುಮೋದನೆಗಾಗಿ, ಪ್ರಸ್ತಾವ ಸಲ್ಲಿಕೆಯಾಗಿದೆ ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ವಿಧಾನ ಪರಿ ‘ತ್ತಿನ ಪ್ರಶ್ನೋತ್ತರ ಕಲಾಪದಲ್ಲಿ, ಸದಸ್ಯ ಜವರಾಯಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ, ರಾಜ್ಯದಲ್ಲಿ ಕೇಂದ್ರ ಅನುಮೋದಿತ 65 ಸಾವಿರದ 931 ಅಂಗನವಾಡಿ ಕೇಂದ್ರಗಳು ಹಾಗೂ ರಾಜ್ಯ ಸರ್ಕಾರದ ವತಿಯಿಂದ, ಅನುದಾನಿತ 3 ಸಾವಿರದ 988 ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ ಎಂದರು.

<><><>

ಗ್ರಾಮ ಪಂಚಾಯ್ತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ, ಮಾಸಿಕ ಗೌರವ ಧನವನ್ನು ಹೆಚ್ಚಿಸುವ ಬೇಡಿಕೆಯನ್ನು, ಮುಖ್ಯಮಂತ್ರಿಯವರ ಗಮನಕ್ಕೆ ತರುವುದಾಗಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಖಾತೆ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ವಿಧಾನ ಪರಿ ‘ತ್ತಿನಲ್ಲಿ, ಸದಸ್ಯ ಧನಂಜಯ ಸರ್ಜಿ ಹಾಗೂ ಡಿ.ಎಸ್.ಅರುಣ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ, ಉತ್ತರಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲ ವೃಂದ ಸಂಘಗಳು ಹಾಗೂ ಗ್ರಾಮ ಪಂಚಾಯ್ತಿ ಸದಸ್ಯರ ಒಕ್ಕೂಟಗಳು ಸಲ್ಲಿಸಿರುವ ಬೇಡಿಕೆಗಳನ್ನು, ಪರಿಶೀಲಿಸಿದ್ದಾಗಿ ಸಚಿವರು ಹೇಳಿದರು.

<><><>

ಎಲೆ ಚುಕ್ಕೆ ರೋಗದಿಂದ, ರಾಜ್ಯದಲ್ಲಿ ಸುಮಾರು, 53 ಸಾವಿರದ 977 ಹೆಕ್ಟರ್ ಪ್ರದೇಶದ ಅಡಕೆ ಬೆಳೆ ಹಾನಿಯಾಗಿದೆ. ರೋಗ ಹರಡದಂತೆ ನಿಯಂತ್ರಿಸಲು, ಶಿವಮೊಗ್ಗ ತೋಟಗಾರಿಕೆ ವಿಶ್ವವಿದ್ಯಾಲಯದ ತಜ್ಞರ ನೇತೃತ್ವದ ತಂಡ ರಚನೆ ಮಾಡಿದ್ದು, ಸಂಶೋಧನೆಗೆ 50 ಲಕ್ಷ ರೂಪಾಯಿ ಅನುದಾನ ಒದಗಿಸಲಾಗಿದೆ ಎಂದು, ತೋಟಗಾರಿಕೆ ಖಾತೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ತಿಳಿಸಿದ್ದಾರೆ. ವಿಧಾನ ಸಭೆ ಪ್ರಶ್ನೋತ್ತರ ಕಲಾಪದಲ್ಲಿ, ಚುಕ್ಕೆ ಗುರುತಿನ ಪ್ರಶ್ನೆಗೆ ಸಚಿವರು, ಉತ್ತರಿಸಿದರು.

<><><>

ವಿವಿಧ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ, ಬೆಳಗಾವಿಯ ಕೊಂಡಸಕೊಪ್ಪದ ಸುವರ್ಣ ಸೌಧದ ಎದುರು, ಪ್ರತಿಭಟನೆ ನಡೆಸಿದ ರೈತರನ್ನು ಭೇಟಿ ಮಾಡಿದ, ಉನ್ನತ ಶಿಕ್ಷಣ ಖಾತೆ ಸಚಿವ ಎಂ.ಸಿ. ಸುಧಾಕರ್, ಮುಖ್ಯಮಂತ್ರಿಯವರ ಗಮನಕ್ಕೆ ತಂದು, ಸಮಸ್ಯೆಗಳನ್ನು ಬಗೆಹರಿಸುವ ಭರವಸೆ ನೀಡಿದ್ದಾರೆ. ರೈತ ಮುಖಂಡ ಕೋಡಿಹಳ್ಳಿ ಚಂದ್ರಶೇಖರ ನೇತೃತ್ವದಲ್ಲಿ ರಾಜ್ಯ ರೈತ ಸಂಘಟನೆ, ಹಸಿರು ಸೇನೆಯ ರೈತರು ಚಳವಳಿಯಲ್ಲಿ ಪಾಲ್ಗೊಂಡಿದ್ದರು. ಮುಖ್ಯಮಂತ್ರಿಯವರು ಸಹಾನುಭೂತಿಯಿಂದ, ತಮ್ಮ ಬೇಡಿಕೆಗಳನ್ನು ಈಡೇರಿಸುವ ವಿಶ್ವಾಸವಿದೆ ಎಂದರು.

<><><>

ಹಾವೇರಿಯಲ್ಲಿ ಜರುಗಿದ ಪದವಿ ಪೂರ್ವ ಕಾಲೇಜುಗಳ, ರಾಜ್ಯ ಮಟ್ಟದ ಟೇಕ್ವಾಂಡೋ ಸ್ಪರ್ಧೆಯಲ್ಲಿ, ಧಾರವಾಡ ಜಿಲ್ಲೆಯನ್ನು ಪ್ರತಿನಿಧಿಸಿದ, ಸಾಯಿಪ್ರಸಾದ ಪಿ.ಕೆ ಹಾಗೂ ಪ್ರಿಯಾ ವೆಂಕಟಾಪೂರ, ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಧಾರವಾಡ ಜಿಲ್ಲಾ ಟೆಕ್ವಾಂಡೋ ಅಸೋಸಿಯೇಶನ್ ನ ಅಂಜಲಿ ಪರಪ್ಪ ಹಾಗೂ ಪರಪ್ಪ ಅವರು, ಕ್ರೀಡಾಪಟುಗಳಿಗೆ ಮಾರ್ಗದರ್ಶನದಲ್ಲಿ ತರಬೇತಿ ನೀಡುತ್ತಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>